1) ಮೆಟ್ರಿಕ್–ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಮುನಿಯಾಲ
2) ಮೆಟ್ರಿಕ್–ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಗೋಳಿ ಅಂಗಡಿ
3) ಮೆಟ್ರಿಕ್–ನಂತರದ ಬಾಲಕರ ವಿದ್ಯಾರ್ಥಿನಿಲಯ, ಬನ್ನಂಜೆ

ಈ) ಸ್ವಂತ ಕಟ್ಟಡವಿಲ್ಲದ ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಿ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು?

ಪ್ರತಿ ವರ್ಷ ಆಯವ್ಯಯ ಲಭ್ಯತೆ ಆಧರಿಸಿ, ರಾಜ್ಯದ ಒಟ್ಟಾರೆ ನಿರ್ಮಿಸಬೇಕಾಗಿರುವ ವಿದ್ಯಾರ್ಥಿನಿಲಯಗಳ ಕಟ್ಟಡಗಳ ಸಂಖ್ಯೆ, ಲಭ್ಯವಿರುವ ನಿವೇಶನಗಳ ಸಂಖ್ಯೆಗಳನ್ನು ಆಧರಿಸಿ, ಹಂತ ಹಂತವಾಗಿ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ ಮಾಡಲು ಕ್ರಮವಹಿಸಲಾಗುವುದು.

ನಿವೇಶನಗಳನ್ನು ಒದಗಿಸಲು ಜಿಲ್ಲಾಧಿಕಾರಿಗಳೊಂದಿಗೆ ಪತ್ರ ವ್ಯವಹಾರ ಮಾಡಲಾಗಿದೆ.

ಸಂಖ್ಯೆ:ಸಕಇ 83 ಬಿಎಂಎಸ್ 2009

(ಡಿ.ಸುಧಾಕರ)
ಸಮಾಜ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

271 ಶ್ರೀ. ಸುರೇಶ್ ಬಾಬು ಸಿ.ಬಿ (ಚಿಕ್ಕನಾಯಕನಹಳ್ಳಿ)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

ಅ) ಚಿಕ್ಕನಾಯಕನಹಳ್ಳಿ ಕ್ಷೇತ್ರ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮತ್ತು ಚಿಕ್ಕನಾಯಕನಹಳ್ಳಿ ತಾಲ್ಲೂಕು ಮಟ್ಟದ ಆಸ್ಪತ್ರೆಯಲ್ಲಿ, ತಜ್ಞ ವೈದ್ಯರು ಮತ್ತು ಅರೆ ವೈದ್ಯಕೀಯ ಸಿಬ್ಬಂದಿ, ಗ್ರೂಪ್ 'ಡಿ' ನೌಕರರ ಕೊರತೆಯಿರುವುದು ಸರ್ಕಾರದ ಮನಕ್ಕೆ ಬಂದಿದೆಯೇ?

ಬಂದಿದೆ.

ಆ) ಹಾಗಿದ್ದಲ್ಲಿ, ಸಿಬ್ಬಂದಿ ಕೊರತೆಯನ್ನು ಹೋಗಲಾಡಿಸಲು ಸರ್ಕಾರವು ಕೈಗೊಂಡಿರುವ ಕ್ರಮವೇನು?

ಇ) ಯಾವ ಕಾಲಮಿತಿಯೊಳಗೆ ಸಿಬ್ಬಂದಿ ಕೊರತೆಯನ್ನು ನಿವಾರಿಸಲು ಕ್ರಮ ಕೈಗೊಳ್ಳಲಾಗುವುದು?

ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ತಾತ್ಕಾಲಿಕವಾಗಿ ನಿವೃತ್ತ ತಜ್ಞ ವೈದ್ಯರುಗಳನ್ನು ಸಂದರ್ಶಕ ತಜ್ಞ ವೈದ್ಯರುಗಳನ್ನಾಗಿ ನೇಮಿಸಿಕೊಳ್ಳಲು ಜಿಲ್ಲಾ ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ. ಇಲಾಖೆಯಲ್ಲಿ ಸೇವಾನಿರತ

ವೈದ್ಯರುಗಳು ಸ್ನಾತಕೋತ್ತರ ಪದವಿ ಪಡೆದು ಬಂದ ನಂತರ ತಜ್ಞ ವೈದ್ಯರುಗಳನ್ನು ಆದ್ಯತೆ ಮೇರೆಗೆ ಭರ್ತಿ ಮಾಡಲು ಸಹ ಕ್ರಮ ಕೈಗೊಳ್ಳಲಾಗುವುದು.

ಆರೋಗ್ಯ ಇಲಾಖೆಯಲ್ಲಿ ಖಾಲಿ ಇರುವ 5021 ಅರೆವೈದ್ಯಕೀಯ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಲು, ನೇಮಕಾತಿ ನಿಯಮಗಳ ಕರಡು ಅಧಿಸೂಚನೆಯನ್ನು ಆಕ್ಷೇಪಣೆ/ಸಲಹೆ ಸಲ್ಲಿಸಲು 15 ದಿನಗಳ ಕಾಲಾವಕಾಶ ನೀಡಿ ದಿನಾಂಕ:7-2-2009 ರಂದು ಹೊರಡಿಸಲಾಗಿದೆ. ಸದರಿ ನಿಯಮಗಳು ಅಂತಿಮಗೊಂಡ ನಂತರ ನೇಮಕಾತಿ ಪ್ರಕ್ರಿಯೆ ಪ್ರಾರಂಭಗೊಳ್ಳುತ್ತದೆ. ಅಭ್ಯರ್ಥಿಗಳು ಲಭ್ಯವಾದ ನಂತರ ಖಾಲಿ ಹುದ್ದೆಗಳನ್ನು ಆದ್ಯತೆ ಮೇಲೆ ಭರ್ತಿ ಮಾಡಲಾಗುವುದು.

ಸಂಖ್ಯೆ: ಆಕುಕ 13 ಹೆಚ್‌ಎಸ್‌ಡಿ 09

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

ಕರ್ನಾಟಕ ವಿಧಾನ ಸಭೆ

272 ಶ್ರೀ.ಸುರೇಶ್ ಬಾಬು ಸಿ.ಬಿ (ಚಿಕ್ಕನಾಯಕನಹಳ್ಳಿ)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

ಅ) ಚಿಕ್ಕನಾಯಕನಹಳ್ಳಿ ವಿಧಾನಸಭಾ ಕ್ಷೇತ್ರದ ಶಿರಾ ತಾಲ್ಲೂಕು ಬುಕ್ಕಾಪಟ್ಟಣ ಹೋಬಳಿ ಕೇಂದ್ರದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸುವ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈಗಾಗಲೇ ರಾಜ್ಯದಲ್ಲಿನ ಅನೇಕ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದ್ದು, ಸದರಿ ಮೇಲ್ದರ್ಜೆಗೇರಿಸಲಾದ ಸಮುದಾಯ ಆರೋಗ್ಯ ಕೇಂದ್ರಗಳಿಗೆ ಒದಗಿಸಬೇಕಾಗಿರುವ ಮೂಲಭೂತ ಸೌಕರ್ಯ ಹಾಗೂ ಸಿಬ್ಬಂದಿಯನ್ನು ಪೂರ್ಣ ಪ್ರಮಾಣದಲ್ಲಿ ಒದಗಿಸಲು ಸಾಧ್ಯವಾಗಿರುವುದಿಲ್ಲ. ಈಗಾಗಲೇ ಮೇಲ್ದರ್ಜೆಗೇರಿಸಿರುವ ಅಂತಹ ಕೇಂದ್ರಗಳಿಗೆ ಸೌಲಭ್ಯ ಒದಗಿಸಿ ಬಲಪಡಿಸಬೇಕಾಗಿದೆ. ಆದುದರಿಂದ ಸಧ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಆ) ಹಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡಿರುವ ಕ್ರಮವೇನು?